ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ಪಿರಿಯಾಪಟ್ಟಣ ಬಸ್ ನಿಲ್ದಾಣದ ಕಾಮಗಾರಿ ಬಗ್ಗೆ

ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

370 (440) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪಿರಿಯಾಪಟ್ಟಣದಲ್ಲಿ ನಿರ್ಮಿಸುತ್ತಿರುವ ಬಸ್ ನಿಲ್ದಾಣದ ಕಾಮಗಾರಿ ಮಂದಗತಿಯಿಂದ ನಡೆಯುತ್ತಿದ್ದು, ಇದನ್ನು ಆದಷ್ಟು ಬೇಗ ಪೂರ್ಣಗೊಳಿಸಲು ಕ್ರಮ ಜರುಗಿಸಲಾಗುವುದೇ; ಯಾವ ಯಾವ ಕಾಮಗಾರಿಗಳು ಬಾಕಿ ಇವೆ; ಯಾವಾಗ ಈ ಕಾಮಗಾರಿಗಳನ್ನು ಸಂಪೂರ್ಣಗೊಳಿಸಲಾಗುತ್ತದೆ;

(ಆ) ಬಸ್ ನಿಲ್ದಾಣದಲ್ಲಿ ಪ್ರಯಾಣಿಕರಿಗೆ ಕುಳಿತುಕೊಳ್ಳಲು ಆಸನ ವ್ಯವಸ್ಥೆಯನ್ನು ಮಾಡಲಾಗುವುದೇ; ರೋಟರಿಯವರು ಹಾಕಿಸಿರುವ ಕಲ್ಲುಬೆಂಚುಗಳನ್ನು ಸೂಕ್ತವಾಗಿ ನಿರ್ವಹಣೆ ಮಾಡಿ ಪ್ರಯಾಣಿಕರಿಗೆ ಅನುಕೂಲ ಮಾಡಿಕೊಡಲಾಗುವುದೇ;

(ಇ) ರೋಟರಿಯವರು ನೀಡಿದ್ದ ಶುದ್ಧ ಕುಡಿಯುವ ನೀರಿನ ಘಟಕ ಕೆಟ್ಟುಹೋಗಿದ್ದು, ಅದನ್ನು ಸರಿಪಡಿಸಿ ಪ್ರಯಾಣಿಕರಿಗೆ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಲಾಗುವುದೇ?